# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 239
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 06.03.2025 **(ಒಳಾಡಳಿತ ಇಲಾಖೆಯಿಂದ ವರ್ಗಾವಣೆಗೊಂಡಿರುತ್ತದೆ)**
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು.

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಬೃಹತ್ ಮತ್ತು ಇತರ ನಗರ ಪ್ರದೇಶಗಳಲ್ಲಿ ವ್ಯಾಪಾರ ವಹಿವಾಟು ಅವಧಿಯನ್ನು ನಿಗಧಿಪಡಿಸಲಾಗಿದೆಯೇ: ನಿಗಧಿಪಡಿಲಾಗಿದ್ದರೆ ಯಾವ ಯಾವ ನಗರಗಳಲ್ಲಿ ಗರಿಷ್ಠ ಎಷ್ಟು ಸಮಯದವರೆಗೆ ವ್ಯಾಪಾರ ವಹಿವಾಟು ನಡೆಸಬಹುದು: (ಎಷ್ಟು ಗಂಟೆಯಿಂದ ಎಷ್ಟು ಗಂಟೆಗಳವರೆಗೆ ಎಂಬ ಮಾಹಿತಿ ಸಹಿತ ವಿವರ ನೀಡುವುದು) | 2024-25 ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ 269 ರಲ್ಲಿ ಘೋಷಿಸಲಾದಂತೆ ರಾಜ್ಯದ ಬೃಹತ್ ಮತ್ತು ಇತರ ನಗರ ಪ್ರದೇಶಗಳಲ್ಲಿ ವ್ಯಾಪಾರ ವಹಿವಾಟು ಅವಧಿಯನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ/94/ಎಂಎನ್ಇ/2024. ದಿನಾಂಕ: 23-08-2024 ರಲ್ಲಿ ಬೆಂಗಳೂರು ಹಾಗೂ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಾಣಿಜ್ಯ ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ನಿರ್ಬಂಧಕ್ಕೆ ಬೆಳಗಿನ ಜಾವ 1.00 ಗಂಟೆಯವರೆಗೆ ವಿನಾಯತಿ ನೀಡಿ ಆದೇಶಿಸಲಾಗಿರುತ್ತದೆ. **(ಅನುಬಂಧದಲ್ಲಿ ನೀಡಿದೆ)** |
| ಆ) | ಈಗಾಗಲೇ ಸರ್ಕಾರ ನಿಗಧಿಪಡಿಸಿರುವ ವ್ಯಾಪಾರ ವಹಿವಾಟು ಅವಧಿಯ (duration) ಮಾನದಂಡಗಳು ರಾಜ್ಯದ ಸಣ್ಣ ನಗರಗಳಿಗೆ ಅನ್ವಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಈ ನಿಯಮಗಳನ್ನು ಗೃಹ ಇಲಾಖೆ ಮಾರ್ಪಡಿಸಲು ವಹಿಸಲಾದ ಕ್ರಮಗಳೇನು | ಸರ್ಕಾರದ ಆದೇಶ ಸಂಖ್ಯೆ: ನಅಇ/94/ಎಂಎನ್ ಇ/2024. ದಿನಾಂಕ: 23-08-2024 ರಲ್ಲಿ ಸರ್ಕಾರ ನಿಗಧಿಪಡಿಸಿರುವ ವ್ಯಾಪಾರ ವಹಿವಾಟು ಅವಧಿಯ (duration) ಮಾನದಂಡಗಳು ರಾಜ್ಯದ ಮಹಾನಗರ ಪಾಲಿಕೆಗಳಿಗೆ ಮಾತ್ರ ಅನ್ವಯವಾಗುತ್ತದೆ. ರಾಜ್ಯದ ಸಣ್ಣ ನಗರಗಳಿಗೆ ಅನ್ವಯಿಸುವುದಿಲ್ಲ. |
| ಇ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ದೇವಸ್ಥಾನ ಸಂಬಂಧಿತ (ಟೆಂಪಲ್ ಟೋರಿಸಂ) ಹಾಗೂ ಇತರ ಪ್ರವಾಸೋಧ್ಯಮ ಅವಕಾಶಗಳ ಹಿನ್ನಲೆಯಲ್ಲಿ ಸಾರ್ವಜನಿಕ ಸಾರಿಗೆ ಸಹಿತ ವ್ಯಾಪಾರ ವಹಿವಾಟು ಅವಧಿಯನ್ನು ವಿಸ್ತರಿಸುವ ಬಗ್ಗೆ ಗೃಹ ಇಲಾಖೆ ಸಂಬಂಧಪಟ್ಟ ಇತರ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿದೆಯೇ: | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ದೇವಸ್ಥಾನ ಸಂಬಂಧಿತ (ಟೆಂಪಲ್ ಟೋರಿಸಂ) ಹಾಗೂ ಇತರ ಪ್ರವಾಸೋಧ್ಯಮ ಅವಕಾಶಗಳ ಹಿನ್ನಲೆಯಲ್ಲಿ ಸಾರ್ವಜನಿಕ ಸಾರಿಗೆ ಸಹಿತ ವ್ಯಾಪಾರ ವಹಿವಾಟು ಅವಧಿಯನ್ನು ವಿಸ್ತರಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

| | | |
|---|---|---|
| ಈ) | ಸದರಿ ಜಿಲ್ಲೆಗಳಲ್ಲಿ ಸುರಕ್ಷತೆ, ಭದ್ರತೆ ಹಾಗೂ ಕಾನೂನು ಸುವ್ಯವಸ್ಥೆ ನೆಪದಲ್ಲಿ ನಿಗದಿತ ಅವಧಿಯ ನಂತರ ವ್ಯಾಪಾರ ವಹಿವಾಟುಗಳನ್ನು ಪೊಲೀಸರು ಬಲವಂತವಾಗಿ ಬಂದುಮಾಡಿಸುತ್ತಿರುವ ಬಗ್ಗೆ ವ್ಯಾಪಾರೋದ್ಯಮಿಗಳು, ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳು ನೀಡಿದ ಮನವಿಗಳ ಕುರಿತು ಸರ್ಕಾರ ಯಾವ ರೀತಿ ಕ್ರಮವಹಿಸುತ್ತಿದೆ? | ಈ ಬಗ್ಗೆ ವ್ಯಾಪಾರೋದ್ಯಮಿಗಳಿಂದಾಗಲಿ ಸಾರ್ವಜನಿಕರಿಂದಾಗಲಿ, ಜನ ಪ್ರತಿನಿಧಿಗಳಿಂದಾಗಲಿ ಯಾವುದೇ ಮನವಿಗಳು ಸ್ವೀಕೃತವಾಗಿರುವುದಿಲ್ಲ. |

**ಸಂಖ್ಯೆ: ನಅಇ 83 ಎಂಎನ್‌ಇ 2025 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ
ಯೋಜನೆ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 269ರಲ್ಲಿ ಘೋಷಿಸಿರುವಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ರಾತ್ರಿಯ ವೇಳೆ ವ್ಯಾಪಾರ ವಹಿವಾಟಿನ ತೆರೆದಿರುವ ಅವಧಿಯನ್ನು ಬೆಳಗಿನ ಜಾವ 1.00 ಗಂಟೆಯವರೆಗೆ ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 269.
2. ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ 1976.
3. ಕರ್ನಾಟಕ ಅಬಕಾರಿ(ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967
4. ಕರ್ನಾಟಕ ಅಂಗಡಿಗಳ ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ ಅಧಿನಿಯಮ, 1961.
5. ಕಾರ್ಮಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: E-LD 4 LET 2019, ದಿನಾಂಕ: 02.01.2021.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ದಿನಾಂಕ:06.07.2024.
7. ಸರ್ಕಾರದ ಆದೇಶ ಸಂಖ್ಯೆ: ನಅಇ 298 ಎಂಎನ್‌ವೈ 2024, ದಿನಾಂಕ:29.07.2024 ಮತ್ತು ತಿದ್ದುಪಡಿ ಆದೇಶ ದಿನಾಂಕ:06.08.2024.

****

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 269 ರಲ್ಲಿ "ಬೆಂಗಳೂರು ಹಾಗೂ 10 ಮಹಾನಗರ ಪಾಲಿಕೆಗಳಲ್ಲಿ ವಾಣಿಜ್ಯ -ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧವನ್ನು ಬೆಳಗಿನ ಜಾವ ಒಂದು ಗಂಟೆಯವರೆಗೆ (01:00 am) ವಿಸ್ತರಿಸಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ (2) ರಲ್ಲಿ ಓದಲಾದ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ, 1976 ರ ಕಲಂ 378(b) ರಲ್ಲಿ ಮುನ್ಸಿಪಲ್ ಕಮೀಷನ್‌ರವರಿಗೆ ಮಾರ್ಕೆಟ್, ಬಜಾರ್ ಇತ್ಯಾದಿಗಳ ಮೇಲಿನ ಪರವಾನಗಿ, ವೇಳೆ ನಿಗದಿ, ದಿನಗಳ ನಿರ್ಧರಣದ ಅಧಿಕಾರವನ್ನು ನೀಡಲಾಗಿರುತ್ತದೆ.

ಮೇಲೆ (3) ರಲ್ಲಿ ಓದಲಾದ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967 ರ ನಿಯಮ 4 ರ ಅಡಿಯಲ್ಲಿ ಅಬಕಾರಿ ಆಯುಕ್ತರಿಗೆ ಸದರಿ ನಿಯಮಗಳ ಅಡಿ ಲೈಸೆನ್ಸ್ ಪಡೆದ ಬಾರ್ & ರೆಸ್ಟೋರೆಂಟ್, ಹೋಟೆಲ್‌ಗಳು ಇತ್ಯಾದಿಗಳು ತೆರೆದಿರುವ ಅವಧಿಯಲ್ಲಿ ನಿಗದಿಪಡಿಸಲು ಅಧಿಕಾರವಿರುತ್ತದೆ.

 K. Nagesh

ಮೇಲೆ (4) ರಲ್ಲಿ ಓದಲಾದ ಕರ್ನಾಟಕ ಅಂಗಡಿಗಳ ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ ಅಧಿನಿಯಮ, 1961 ರ ಕಲಂ 11 ರಲ್ಲಿ ಸರ್ಕಾರದಿಂದ ಅಧಿಸೂಚನೆ ಹೊರಡಿಸಿ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳು ತೆರೆದಿರುವ ಅವಧಿಯನ್ನು ನಿಗದಿಪಡಿಸಲು ಅವಕಾಶವಿರುತ್ತದೆ.

ಅದರಂತೆ ಮೇಲೆ (5) ರಲ್ಲಿ ಓದಲಾದ ದಿನಾಂಕ: 02-01-2021 ರ ಅಧಿಸೂಚನೆಯಲ್ಲಿ ಕಾರ್ಮಿಕ ಇಲಾಖೆಯು ಹತ್ತು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯ ನೌಕರರನ್ನು ಹೊಂದಿದ ರಾಜ್ಯದಲ್ಲಿನ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳು ದಿನದ 24 ಗಂಟೆಯೂ ತೆರೆದಿರಲು ಅವಕಾಶವನ್ನು ಕಲ್ಪಿಸಿರುತ್ತದೆ.

ಮೇಲೆ (6)ರಲ್ಲಿ ಓದಲಾದ ದಿನಾಂಕ:06.07.2024ರ ಸಭಾ ನಡವಳಿಯಲ್ಲಿ, 2024-25ನೇ ಸಾಲಿನಲ್ಲಿ ಆಯವ್ಯಯ ಭಾಷಣದ ಕಂಡಿಕೆ 269ರಲ್ಲಿ ಬೆಂಗಳೂರು ಹಾಗೂ 10 ಮಹಾನಗರ ಪಾಲಿಕೆಗಳಲ್ಲಿ ವಾಣಿಜ್ಯ ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ ವಹಿವಾಟಿನ ಮೇಲಿನ ನಿರ್ಬಂಧವನ್ನು ಬೆಳಗಿನ ಜಾವ ಒಂದು ಗಂಟೆಯವರಿಗೆ( 1.00 am) ವಿಸ್ತರಿಸುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯಿಂದ ಸರ್ಕಾರಿ ಆದೇಶವೊಂದನ್ನು ಹೊರಡಿಸಲಾಗುವುದು ಎಂದು ನಿರ್ಣಯಿಸಲಾಗಿರುತ್ತದೆ.

ಅದರಂತೆ, ಮೇಲೆ (7)ರಲ್ಲಿ ಓದಲಾದ, ಸರ್ಕಾರದ ಆದೇಶ ಮತ್ತು ತಿದ್ದುಪಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾಣಿಜ್ಯ-ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧಕ್ಕೆ ಬೆಳಗಿನ ಜಾವ ಒಂದು ಗಂಟೆಯವರೆಗೆ (01:00 am) ವಿನಾಯಿತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾಣಿಜ್ಯ-ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧಕ್ಕೆ ಬೆಳಗಿನ ಜಾವ ಒಂದು ಗಂಟೆಯವರೆಗೆ (01:00 am) ವಿನಾಯಿತಿ ನೀಡಿ ಆದೇಶಿರುವಂತೆ ರಾಜ್ಯದ ಇತರೆ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಾಣಿಜ್ಯ-ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧಕ್ಕೆ ವಿನಾಯಿತಿ ನೀಡುವುದು ಅವಶ್ಯವೆಂದು ಮನಗಂಡು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 94 ಎಂಎನ್‌ಇ 2024,**

**ಬೆಂಗಳೂರು, ದಿನಾಂಕ: 23.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 269 ರಲ್ಲಿ ಘೋಷಿಸಲಾದಂತೆ ರಾಜ್ಯದ ಎಲ್ಲಾ 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಾಣಿಜ್ಯ ವ್ಯಾಪಾರದ ದೃಷ್ಟಿಯಿಂದ ರಾತ್ರಿಯ ವೇಳೆ ವ್ಯಾಪಾರ-ವಹಿವಾಟಿನ ಮೇಲಿನ ನಿರ್ಬಂಧಕ್ಕೆ ಬೆಳಗಿನ ಜಾವ ಒಂದು ಗಂಟೆಯವರೆಗೆ (01:00 am) ವಿನಾಯಿತಿ ನೀಡಿ ಆದೇಶಿಸಿದೆ.

K. Nagesh

ಈ ಆದೇಶವನ್ನು, ದಿನಾಂಕ:06.07.2024ರಂದು ನಡೆದ ಸಭೆಯಲ್ಲಿ, ಆರ್ಥಿಕ ಇಲಾಖೆ ನೀಡಿದ ಸಹಮತಿ ಹಾಗೂ ಯೋಜನಾ ಇಲಾಖೆಯು ಹಿಂಬರಹ ಸಂಖ್ಯೆ: PDS-DPD/54/2024, ದಿನಾಂಕ:02.07.2024 ರಲ್ಲಿ, ನೀಡಿರುವ ಅಭಿಪ್ರಾಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

23/08/2024
(ನಾಗೇಶ್ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಮಹಾನಗರಪಾಲಿಕೆ-2)
23/08/24

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ನಗರಾಭಿವೃದ್ಧಿ ಮತ್ತು ಯೋಜನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ ಗೋಪುರ, ಬೆಂಗಳೂರು.
11. ಪೊಲೀಸ್ ಆಯುಕ್ತರು / ಅಧೀಕ್ಷಕರು, ಹುಬ್ಬಳ್ಳಿ-ಧಾರವಾಡ/ ಶಿವಮೊಗ್ಗ/ಬೆಳಗಾವಿ/ತುಮಕೂರು/ ದಾವಣಗೆರೆ/ ಕಲಬುರಗಿ/ಮೈಸೂರು/ಮಂಗಳೂರು/ಬಳ್ಳಾರಿ/ವಿಜಯಪುರ.
12. ಆಯುಕ್ತರು, ಕಾರ್ಮಿಕ ಭವನ, ಡೈರಿ ಸರ್ಕಲ್, ಬನ್ನೇರಘಟ್ಟ ರಸ್ತೆ, ಬೆಂಗಳೂರು.
13. ಆಯುಕ್ತರು, ಅಬಕಾರಿ ಇಲಾಖೆ, ಬೆಂಗಳೂರು.

14. ಜಿಲ್ಲಾಧಿಕಾರಿಗಳು, ಧಾರವಾಡ/ ಶಿವಮೊಗ್ಗ/ಬೆಳಗಾವಿ/ತುಮಕೂರು/ದಾವಣಗೆರೆ/ ಕಲಬುರಗಿ/ಮೈಸೂರು/ಮಂಗಳೂರು/ಬಳ್ಳಾರಿ/ವಿಜಯಪುರ.

15. ಆಯುಕ್ತರು, 10 ಮಹಾನಗರ ಪಾಲಿಕೆಗಳು (ಹುಬ್ಬಳ್ಳಿ-ಧಾರವಾಡ/ ಶಿವಮೊಗ್ಗ/ಬೆಳಗಾವಿ/ತುಮಕೂರು,/ ದಾವಣಗೆರೆ/ ಕಲಬುರಗಿ /ಮೈಸೂರು /ಮಂಗಳೂರು /ಬಳ್ಳಾರಿ/ ವಿಜಯಪುರ.

16. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು